**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 561/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ01**

**ದಿನಾಂಕಃ 17.10.2025** **ಸಿಡಬ್ಲ್ಯೂ02**

| | |
|---|---|
| ಹೆಸರು | ಸಿದ್ದೇಶ |
| ತಂದೆ ಹೆಸರು | ಬಸವರಾಜಪ್ಪ |
| ವಯಸ್ಸು | 37 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಗುತ್ತೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.3 ರವರ ಪರಿಚಯವಿಲ್ಲ. ಆರೋಪಿಯ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಲಾರಿ ಮತ್ತು ಮರಳಿನ ಅಮಾನತು ಪಂಚನಾಮೆಯಾಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು 2022 ರಲ್ಲಿ ಗುತ್ತೂರು ಗ್ರಾಮದ ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ 2 ಪೋಟೋ ತೋರಿಸಲಾಗಿ ಅವುಗಳಲ್ಲಿ ತಾವು ಇರುವುದಾಗಿ ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರಗಳನ್ನು ನಿಪಿ.3 ಮತ್ತು 4 ಎಂದು ಗುರುತಿಸಲಾಯಿತು. ಸದರಿ ಛಾಯ ಚಿತ್ರಗಳನ್ನು ಗುತ್ತೂರಿನಲ್ಲಿ ತೆಗೆದಿರುತ್ತಾರೆ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 05.12.2022 ರಂದು ಗ್ರಾಮಾಂತರ ಪೊಲೀಸ್ ಠಾಣೆ ಹತ್ತಿರ ಒಂದು ಲಾರಿಯನ್ನು ಜಪ್ತು ಪಡಿಸಿಕೊಳ್ಳಬೇಕು ಎಂದು ನನಗೆ ಮತ್ತು ಚಾಸಾ.3 ರವರಿಗೆ ಪೊಲೀಸರು ಪ್ರಕರಣದ ವಿದ್ಯಮಾನ ತಿಳಿಸಿ ಪಂಚರಾಗಿ ಸಹಕರಿಸಿ ಎಂದು ಕೇಳಿಕೊಂಡು ನೋಟಿಸ್ ನೀಡಿ ನಮ್ಮ ಸಮಕ್ಷಮ ಕೆಎ/17 ಬಿ

6854 ಮತ್ತು ಕೆಎ 15 ಎ 0641 ಮರಳು ತುಂಬಿದ ಲಾರಿಗಳನ್ನು ಅಮಾನತು ಪಡಿಸಿಕೊಂಡಿರುತ್ತಾರೆ  ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಬೆಳಿಗ್ಗೆ 8.00 ರಿಂದ 9.00 ಗಂಟೆವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಕಾಲಕ್ಕೆ ನಿಪಿ.3 ಮತ್ತು 4 ರಂತೆ ಛಾಯ ಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ